ವೈದ್ಯಕೀಯ ಶಿಕ್ಷಣ ಪ್ರವೇಶ.

1598 - ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ವೈದ್ಯಕೀಯ ಶಿಕ್ಷಣ ಪ್ರವೇಶವನ್ನು ಮುಂದಿನ ಶೈಕ್ಷಣಿಕ ವರ್ಷದಿಂದ ವಿಭಾಗವಾರು ಜನಸಂಖ್ಯೆ ಆಧಾರದ ಮೇಲೆ ವಿತರಣೆ ಮಾಡಲು ಸರ್ಕಾರದವರು ಪರಿಶೀಲಿಸುವರೇ?*

ಆ) *ವಿಭಾಗವಾರು ಎಷ್ಟು ಪ್ರವೇಶಾವಕಾಶಗಳು ಲಭ್ಯವಾಗುತ್ತವೆಂಬುದನ್ನು ವಿಭಾಗವಾರು ವಿವರ ನೀಡುವುದು?*

ಡಾ|| ಎಂ. ಶಂಕರನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು) :

ಅ) ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಮೇಲಿನ ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಗದಗ್ ಕ್ಷೇತ್ರದ ಹುಲಿಕೋಟೆ ಗ್ರಾಮದಲ್ಲಿ ಪದವಿ ಮಹಾವಿದ್ಯಾಲಯ ಪ್ರಾರಂಭ.

1599 - ಶ್ರೀ ಡಿ.ಆರ್ ಪಾಟೀಲ್ (ಗದಗ್) : ಮಾನ್ಯ ಪ್ರಾಥಮಿಕ ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗದಗ್ ಕ್ಷೇತ್ರದ ಹುಲಿಕೋಟೆ ಗ್ರಾಮದಲ್ಲಿ ಪದವಿ ಮಹಾವಿದ್ಯಾಲಯ ಪ್ರಾರಂಭಿಸಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ?*

ಆ) *ಈ ಮಹಾವಿದ್ಯಾಲಯವನ್ನು ಮುಂದಿನ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ?*

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು) :

ಅ) ಯಾವುದೇ ಕ್ರಮ ಕೈಗೊಂಡಿಲ್ಲ.

ಆ) ಇಲ್ಲ.

ಜಯನಗರದಲ್ಲಿರುವ ಸಂಜಯಗಾಂಧಿ ಅಪಘಾತ ಹಾಗೂ ಪುನರ್ವಸತಿ ಆಸ್ಪತ್ರೆಗೆ ರಸ್ತೆ ವ್ಯವಸ್ಥೆ ಕಲ್ಪಿಸುವುದು.

1601 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಜಯನಗರದಲ್ಲಿರುವ ಸಂಜಯಗಾಂಧಿ ಅಪಘಾತ ಹಾಗೂ ಪುನರ್ವಸತಿ ಆಸ್ಪತ್ರೆಗೆ ಹೋಗಲು ಸರಿಯಾದ ರಸ್ತೆ ಇಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

ಆ) *ಈ ಆಸ್ಪತ್ರೆಗೆ ಹೋಗಲು ರಸ್ತೆಯನ್ನು ಸರಿಪಡಿಸಲು ಸರ್ಕಾರವು ಕ್ರಮಕೈಗೊಳ್ಳುತ್ತದೆಯೇ?*